ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ನಗರದಲ್ಲಿ ಇರುವ ಸರ್ಕಾರಿ ಹಾಗೂ ಖಾಸಗಿ ಪ್ರೌಢಶಾಲೆ

341 - ಶ್ರೀ ಜಗದೀಶ ಶೆಟ್ಟರ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ ನಗರದಲ್ಲಿ ಇರುವ ಸರ್ಕಾರಿ ಹಾಗೂ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಆ) ಈ ನಗರದಲ್ಲಿ ಇನ್ನೂ ಹೆಚ್ಚಿನ ಶಾಲೆಗಳನ್ನು ಪ್ರಾರಂಭಿಸಲು ಸಾರ್ವಜನಿಕರಿಂದ ಬೇಡಿಕೆ ಬಂದಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡ ಕ್ರಮವೇನು?

ಶ್ರೀ ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ)

ಸರ್ಕಾರಿ		ಖಾಸಗಿ	
ಪ್ರೌಢ	ಪ್ರಾಥಮಿಕ	ಪ್ರೌಢ	ಪ್ರಾಥಮಿಕ
01	04	31	23

ಆ) ಹೌದು, ಈ ಕೆಳಕಂಡಂತೆ ಪ್ರಸ್ತಾವನೆಗಳು ಬಂದಿರುತ್ತವೆ.

ಪ್ರೌಢ	ಪ್ರಾಥಮಿಕ	ಪ್ರೌಢ	ಪ್ರಾಥಮಿಕ
01	01	03	-

ಇ) ಸರ್ಕಾರಿ ಶಾಲೆಗಳ ಮಂಜೂರಾತಿಯ ಬಗ್ಗೆ ಹಣದ ಲಭ್ಯತೆಯನ್ನಾಧರಿಸಿ ಪರಿಶೀಲಿಸಲಾಗುತ್ತಿದೆ.

ಖಾಸಗಿ ಪ್ರೌಢಶಾಲೆಗಳನ್ನು ತೆರೆಯುವ ಪ್ರಸ್ತಾವನೆಗಳನ್ನು ಸರ್ಕಾರಿ ಮಾರ್ಗಸೂಚಿಗಳನ್ವಯ ಪರಿಶೀಲಿಸಿದ್ದು, ಅವಶ್ಯಕತೆಗಳನ್ನು ಪೂರೈಸದಿದ್ದುರಿಂದ ಪರಿಗಣಿಸಿರುವುದಿಲ್ಲ.

ಹುಬ್ಬಳ್ಳಿ ನಗರ ಮತ್ತು ಗ್ರಾಮೀಣ ಕ್ಷೇತ್ರದಲ್ಲಿ ಇರತಕ್ಕ ವ್ಯಾಯಾಮ ಗರಡಿ ಮನೆಗಳು

338 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ ನಗರ ಮತ್ತು ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ಇರತಕ್ಕ ವ್ಯಾಯಾಮ ಶಾಲೆ ಮತ್ತು ಗರಡಿ ಮನೆಗಳ ಸಂಖ್ಯೆ ಎಷ್ಟು?

ಆ) ಸದರಿ ವ್ಯಾಯಾಮ ಶಾಲೆ ಹಾಗೂ ಗರಡಿ ಮನೆಗಳ ಪ್ರೋತ್ಸಾಹಕ್ಕಾಗಿ ಸರ್ಕಾರದವರು ಸಹಾಯಧನವೇನಾದರೂ ನೀಡುತ್ತಿರುವರೆ?

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ)

	ವ್ಯಾಯಾಮ ಶಾಲೆ	ಗರಡಿ ಮನೆ
ಹುಬ್ಬಳ್ಳಿ ನಗರ	5	-
ಹುಬ್ಬಳ್ಳಿ ಗ್ರಾಮೀಣ	-	5